## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 12(124) |
| ಸದಸ್ಯರ ಹೆಸರು | | ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | | 02-03-2020 |
| ಉತ್ತರಿಸಬೇಕಾದ ಸಚಿವರು | | ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ) |
| ಪ್ರಶ್ನೆ | | ಉತ್ತರ |
| ಅ) | ರಾಜ್ಯ ಸರ್ಕಾರದ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಸಂಖ್ಯೆ ಎಷ್ಟು: (ಜಿಲ್ಲಾವಾರು ವಿವರ ನೀಡುವುದು) | ಪ್ರಸ್ತುತ 2019-20ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ:14,545.<br><br>(ಅನುಬಂಧದಲ್ಲಿ ನೀಡಲಾಗಿದೆ) |
| ಆ) | ಅತಿಥಿ ಉಪನ್ಯಾಸಕರುಗಳಿಗೆ ನೀಡುವ ಮಾಸಿಕ ಗೌರವಧನ ಎಷ್ಟು: ಗೌರವಧನ ಹೆಚ್ಚಿಸುವ ಬಗ್ಗೆ ಸರ್ಕಾರದ ನಿಲುವೇನು; | ದಿನಾಂಕ:04.04.2017ರ ಸರ್ಕಾರದ ಆದೇಶ ಸಂಖ್ಯೆ: ಇಡಿ/66/ಡಿಸಿಇ/2017ರನ್ವಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಲ್ಲಿ ಸ್ನಾತಕೋತ್ತರ ಪದವಿ ಪರೀಕ್ಷೆಯಲ್ಲಿ ಕನಿಷ್ಠ ಶೇ.55ರಷ್ಟು ಅಂಕಗಳನ್ನು ಪಡೆದು ಎನ್‌ಇಟಿ/ಎಸ್‌ಎಲ್‌ಇಟಿ ಅಥವಾ ಪಿ.ಹೆಚ್‌ಡಿ ಹೊಂದಿರುವ ಅತಿಥಿ ಉಪನ್ಯಾಸಕರಿಗೆ ನೀಡುತ್ತಿರುವ ಮಾಸಿಕ ಗೌರವಧನದ ಮೊತ್ತವನ್ನು ಮಾರ್ಚ್-2017 ರಿಂದ ಜಾರಿಗೆ ಬರುವಂತೆ ರೂ.11,500/- ರಿಂದ ರೂ.13,000/-(ಹದಿಮೂರು ಸಾವಿರ ರೂಪಾಯಿಗಳು ಮಾತ್ರ) ಗಳಿಗೆ ಹಾಗೂ ಇತರೆ ಅತಿಥಿ ಉಪನ್ಯಾಸಕರ ಮಾಸಿಕ ಗೌರವಧನದ ಮೊತ್ತವನ್ನು ರೂ.9,500/- ರಿಂದ ರೂ.11,000/-(ಹನ್ನೊಂದು ಸಾವಿರ ರೂಪಾಯಿಗಳು ಮಾತ್ರ)ಗಳಿಗೆ ಹೆಚ್ಚಿಸಲಾಗಿದೆ.<br><br>ಪ್ರಸ್ತುತ ಪಾವತಿಸಲಾಗುತ್ತಿರುವ ಮಾಸಿಕ ಗೌರವಧನದ ಮೊತ್ತವನ್ನು ಪರಿಷ್ಕರಿಸುವ ಸಂಬಂಧ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. |
| ಇ) | ಯಾವ ಕಾಲಮಿತಿಯಲ್ಲಿ ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ಹೆಚ್ಚಳ ಮಾಡಲಾಗುವುದು. | ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ಹೆಚ್ಚಳ ಮಾಡುವ ಸಂಬಂಧ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದ್ದು, ಆರ್ಥಿಕ ಇಲಾಖೆಯಿಂದ ಸಹಮತಿ ದೊರೆತ ಕೂಡಲೇ ಪರಿಷ್ಕೃತ ಗೌರವಧನ ಹೆಚ್ಚಿಸಿ ಆದೇಶವನ್ನು ಹೊರಡಿಸಲಾಗುವುದು. |

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)

**ಇಡಿ 57 ಡಿಸಿಇ 2020**

## ಅನುಬಂಧ

### 2019-20ನೇ ಸಾಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಜಿಲ್ಲಾವಾರು ಮಾಹಿತಿ

| ಕ್ರಮ ಸಂಖ್ಯೆ | ಜಿಲ್ಲೆ | ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ |
|---|---|---|
| 1 | ಬಾಗಲಕೋಟೆ | 470 |
| 2 | ಬೆಂಗಳೂರು | 778 |
| 3 | ಬೆಂಗಳೂರು ಗ್ರಾಮಾಂತರ | 163 |
| 4 | ಬೆಳಗಾವಿ | 554 |
| 5 | ಬಳ್ಳಾರಿ | 748 |
| 6 | ಬೀದರ | 230 |
| 7 | ಬಿಜಾಪುರ | 329 |
| 8 | ಚಾಮರಾಜನಗರ | 207 |
| 9 | ಚಿಕ್ಕಮಗಳೂರು | 447 |
| 10 | ಚಿಕ್ಕಬಳ್ಳಾಪುರ | 351 |
| 11 | ಚಿತ್ರದುರ್ಗ | 612 |
| 12 | ದಕ್ಷಿಣ ಕನ್ನಡ | 602 |
| 13 | ದಾವಣಗೆರೆ | 490 |
| 14 | ಧಾರವಾಡ | 258 |
| 15 | ಗದಗ | 328 |
| 16 | ಕಲಬುರಗಿ | 442 |
| 17 | ಹಾಸನ | 959 |
| 18 | ಹಾವೇರಿ | 457 |
| 19 | ಕೋಲಾರ | 407 |
| 20 | ಕೊಪ್ಪಳ | 427 |
| 21 | ಮಡಿಕೇರಿ | 124 |
| 22 | ಮಂಡ್ಯ | 579 |
| 23 | ಮೈಸೂರು | 1040 |
| 24 | ರಾಯಚೂರು | 416 |
| 25 | ರಾಮನಗರ | 285 |
| 26 | ಶಿವಮೊಗ್ಗ | 636 |
| 27 | ತುಮಕೂರು | 717 |
| 28 | ಉಡುಪಿ | 512 |
| 29 | ಉತ್ತರ ಕನ್ನಡ | 667 |
| 30 | ಯಾದಗಿರಿ | 310 |
| ಒಟ್ಟು | | 14545 |